ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 104(114)

ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ವಿಷಯ : ಬಿಳಿಗಿರಿ ರಂಗನಬೆಟ್ಟವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ.

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು

ಉತ್ತರಿಸುವ ದಿನಾಂಕ: : 10-12-2018

ಕ್ರ.ಸ	ಪ್ರಶ್ನೆಗಳು	ಉತ್ತರಗಳು
ಅ)	ಚಾಮರಾಜನಗರ ಜಿಲ್ಲೆಯ ಬಿಳಿಗಿರಿ ರಂಗನ ಬೆಟ್ಟದಲ್ಲಿರುವ ಯಾತ್ರಿ ನಿವಾಸವು ಸಾರ್ವಜನಿಕ ಉಪಯೋಗಕ್ಕೆ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ಯಾತ್ರಿ ನಿವಾಸವನ್ನು ಸಾರ್ವಜನಿಕ ಹಾಗೂ ಪ್ರವಾಸಿಗರಿಗೆ ಒದಗಿಸುವ ಯಾವ ಕ್ರಮ ತೆಗೆದುಕೊಳ್ಳಲಾಗುವುದೇ:	ಈ ಸೌಲಭ್ಯವನ್ನು ನಿರ್ವಹಣೆಗೆ ಮುಜರಾಯಿ ಇಲಾಖೆಗೆ ವಹಿಸಲಾಗಿತ್ತು. ಸದರಿ ಸಂಸ್ಥೆಯು ಸರಿಯಾಗಿ ನಿರ್ವಹಣೆ ಮಾಡದೇ ಇರುವುದರಿಂದ ಈ ಸೌಲಭ್ಯವನ್ನು ಮುಜರಾಯಿ ಇಲಾಖೆಯಿಂದ ವಾಪಸ್ಸು ಪಡೆದು ನಿರ್ವಹಣೆಗೆ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮಕ್ಕೆ ಹಸ್ತಾಂತರಿಸಲು ಸರ್ಕಾರದ ಆದೇಶ ಹೊರಡಿಸಲಾಗಿದೆ ಇನ್ನು ಮುಂದೆ ಸದರಿ ಸೌಲಭ್ಯವನ್ನು ಪರಿಣಾಮಕಾರಿಯಾಗಿ ಪ್ರವಾಸಿಗರಿಗೆ ಒದಗಿಸಲು ಕ್ರಮವಹಿಸಲಾಗುತ್ತಿದೆ.
(ಆ)	ಚಾಮರಾಜನಗರ ಜಿಲ್ಲೆಯ ಸತ್ತೇಗಾಲ ದರ್ಗಾದ ಬಳಿ ನಿರ್ಮಿಸಲಾಗುತ್ತಿರುವ ಯಾತ್ರಿ ನಿವಾಸವಾಗಿ ಮುಕ್ತಾಯಗೊಳಿಸಲು ಕ್ರಮ ಜರುಗಿಸಲಾಗುವುದೇ: ಇದಕ್ಕೆ ಒದಗಿಸಿರುವ ಅನುದಾನ ಮತ್ತು ಬಿಡುಗಡೆ ಆಗಿರುವ ಹಣ ಎಷ್ಟು: ಕಾಮಗಾರಿಗೆ ಬಳಕೆಯಾಗಿರುವ ಹಣ ಎಷ್ಟು: (ವಿವರ ಒದಗಿಸುವುದು)	ಇಲ್ಲಿ ಯಾತ್ರಿನಿವಾಸ ನಿರ್ಮಿಸಲು ರೂ.25.00 ಲಕ್ಷಗಳನ್ನು ಮಂಜೂರು ಮಾಡಿ ಮೊದಲ ಕಂತಾಗಿ ರೂ.10.00 ಲಕ್ಷಗಳನ್ನು ಕಾಮಗಾರಿ ಪ್ರಾರಂಭಿಸಲು ಮೆ॥ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. ಈ ಸೌಲಭ್ಯ ನಿರ್ಮಿಸಲು ಅಗತ್ಯವಾದ ನಿವೇಶನ ಲಭ್ಯವಿರುವುದಿಲ್ಲ, ಹೀಗಾಗಿ ಈ ಕಾಮಗಾರಿಯನ್ನು ರದ್ದುಪಡಿಸಲಾಗಿದೆ.
(ಇ)	ಭರಚುಕ್ಕಿ ಜಲಪಾತದ ಬಳಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಪ್ರವಾಸೋದ್ಯಮ ಅಭಿವೃದ್ಧಿ ಕಾಮಗಾರಿಗಳು ಯಾವುವು: ಆ ಪೈಕಿ ಮುಕ್ತಾಯಗೊಂಡಿರುವ ಹಾಗೂ ಬಾಕಿ ಇರುವ ಕಾಮಗಾರಿಗಳು ಯಾವುವು: ಬಾಕಿ ಇರುವ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು?	ಕಳೆದ ಮೂರು ವರ್ಷಗಳಲ್ಲಿ ಸದರಿ ಜಲಪಾತದ ಬಳಿ ನೂತನ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ. ಪ್ರಸ್ತುತ 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದಲ್ಲಿ ಭರಚುಕ್ಕಿ ಪ್ರದೇಶದಲ್ಲಿ ರೂ.250.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಪಾರ್ಕಿಂಗ್, ಲ್ಯಾಂಡ್‌ಸ್ಕೇಪಿಂಗ್, ಪಾತ್ ವೇ, ಸೀಟಿಂಗ್ ಬೆಂಚಸ್, ಪರಗೋಲ, ಮಕ್ಕಳ ಆಟದ ಪ್ರದೇಶ, ಶೌಚಾಲಯ, ಫೆನ್ಸಿಂಗ್, ವಿಕ್ಷಣಾ ಗೋಪುರ ಮುಂತಾದ ಸೌಲಭ್ಯಗಳನ್ನು ಅನುಷ್ಠಾನಗೊಳಿಸಲಾಗುವುದೆಂದು ಘೋಷಿಸಲಾಗಿದೆ. ಈ ಕಾಮಗಾರಿಯನ್ನು ರೂ.250.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಮಂಜೂರಾತಿ ನೀಡಿ ಮೊದಲ ಕಂತಾಗಿ ರೂ.100.00 ಲಕ್ಷಗಳನ್ನು 2018-19ನೇ ಸಾಲಿನಲ್ಲಿ ಅನುಷ್ಠಾನ ಸಂಸ್ಥೆಯಾದ ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಗಮಕ್ಕೆ ಬಿಡುಗಡೆ ಮಾಡಲಾಗಿದೆ, ಸದರಿ ಸಂಸ್ಥೆಯು ಕಾಮಗಾರಿಯನ್ನು ಪ್ರಾರಂಭಿಸಬೇಕಾಗಿದೆ.

ಸಂಖ್ಯೆ: ಪ್ರಇ 102 ಪ್ರವಾವಿ 2018

(ಪಾರ್ಥ. ಮಹೇಶ್)

ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು